ಮಾನ್ಯ ಆಡಳಿತಗಾರರು ರವರ ಅಧ್ಯಕ್ಷತೆಯಲ್ಲಿ "ನಾಗರಿಕ ಸಹಭಾಗಿತ್ವ ಕಾರ್ಯಕ್ರಮ"(Citizen Participation Programme)ದ ಬಗ್ಗೆ ನಡೆದ ಸಭೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 'ಬೆಂಗಳೂರು ಮಿಷನ್-2022'ಗೆ ಸಂಬಂಧಿಸಿದಂತೆ "ಸ್ವಚ್ಛ ಬೆಂಗಳೂರು" ಅಂಶದಡಿ ಕೈಗೊಂಡಿರುವ ಕಾರ್ಯಗಳ ಬಗ್ಗೆ ಮಾನ್ಯ ಆಡಳಿತಗಾರರು ಶ್ರೀ ಗೌರವಗುಪ್ತ ರವರ ಅಧ್ಯಕ್ಷತೆಯಲ್ಲಿ ಇಂದು ಪಾಲಿಕೆ ಕೇಂದ್ರ ಕಛೇರಿ ಅನೆಕ್ಸ್ ಕಟ್ಟಡ -03ರ ಸಭಾಂಗಣದಲ್ಲಿ "ನಾಗರಿಕ ಸಹಭಾಗಿತ್ವ ಕಾರ್ಯಕ್ರಮ"(Citizen Participation Programme) ದ ಬಗ್ಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಯಿತು. ಈ ವೇಳೆ ವಿಶೇಷ ಆಯುಕ್ತರು(ಘನತ್ಯಾಜ) ರಂದೀಪ್, ಜಂಟಿ ಆಯುಕ್ತರು(ಘನತ್ಯಾಜ್ಯ) ಸರ್ಫರಾಜ್ ಖಾನ್, ಮುಖ್ಯ ಅಭಿಯಂತರರು(ಘನತ್ಯಾಜ್ಯ) ವಿಶ್ವನಾಥ್, ಅಧೀಕ್ಷಕ ಅಭಿಯಂತರರು ಬಸವರಾಜ್ ಕಬಾಡೆ, ಎಲ್ಲಾ ವಲಯ ಜಂಟಿ ಆಯುಕ್ತರುಗಳು, ಎಲ್ಲಾ ವಲಯ ಅಧೀಕ್ಷಕ ಅಭಿಯಂತರರುಗಳು ಹಾಗೂ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಪಾಲ್ಗೊಂಡಿದ್ದರು.

'ಬೆಂಗಳೂರು ಮಿಷನ್ -2022'ಗೆ ಸಂಬಂಧಿಸಿದಂತೆ 'ಸ್ವಚ್ಛ ಬೆಂಗಳೂರು' ಅಂಶದಡಿ ಪಾಲಿಕೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ ಪದ್ಧತಿಯಲ್ಲಿ ಸಾಕಷ್ಟು ಬದಲಾವಣೆಗಳನ್ನು ತರುವ ನಿಟ್ಟಿನಲ್ಲಿ ಕ್ರಮವಹಿಸಬೇಕಿದೆ. ಪಾಲಿಕೆಯ ಸಿಬ್ಬಂದಿ/ಅಧಿಕಾರಿಗಳ ಜೊತೆ ಸಾರ್ವಜನಿಕರು, ಸ್ಥಳೀಯ ನಾಗರಿಕ ಸಂಸ್ಥೆಗಳು, ನಿವಾಸಿ ಸಂಘಗಳು(ಆರ್.ಡಬ್ಲ್ಯೂ.ಎ)ಗಳು ಸೇರಿಕೊಂಡು ಕೆಲಸ ಮಾಡಿದರೆ ತ್ವರಿತಗತಿಯಲ್ಲಿ ಬದಲಾವಣೆಗಳನ್ನು ಕಾಣಲು ಹಾಗೂ ನಗರವನ್ನು ಇನ್ನು ಸ್ವಚ್ಛವಾಗಿಡಲು ಸಾಧ್ಯವಾಗುತ್ತದೆ ಎಂದು ಆಡಳಿತಗಾರರು ತಿಳಿಸಿದರು.

ನಗರದಲ್ಲಿ ಪಾಲಿಕೆ ವತಿಯಿಂದ ಕಸವನ್ನು ಸಂಗ್ರಹ, ವಿಲೇವಾರಿ ಮತ್ತು ಸಂಸ್ಕರಣೆ ಜೊತೆಗೆ ನಾಗರಿಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಪಾಲಿಕೆ ವ್ಯಾಪ್ತಿಯ 198 ವಾರ್ಡ್ ಗಳಲ್ಲಿ 750 ರಿಂದ 1000 ಮನೆಗೊಂದರಂತೆ 4,200 ಬ್ಲಾಕ್ ಗಳನ್ನು ರಚಿಸಲಾಗಿದೆ. ಈ ಪೈಕಿ ಬ್ಲಾಕ್ ಮಟ್ಟದಲ್ಲಿ ಶುಚಿಮಿತ್ರನನ್ನು ಗುರುತಿಸುವುದು, ಲಿಂಕ್ ವರ್ಕರ್ಸ್ ಗಳ ಮೂಲಕ ಹೆಚ್ಚು ಹೆಚ್ಚು ಜಾಗೃತಿ ಮೂಡಿಸುವುದು, ಪ್ರತಿ ವಾರ್ಡ್ ಮಟ್ಟದಲ್ಲಿ ಮಾರ್ಷಲ್, ಕಿರಿಯ ಆರೋಗ್ಯ ಪರಿವೀಕ್ಷಕ ಹಾಗೂ ವಾರ್ಡ್ ಗೊಬ್ಬ ಸ್ವಯಂ ಸೇವಕರ(Citizen Volunteer) ಮೂಲಕ ಅರಿವು ಮೂಡಿಸುವುದು, ಅದಲ್ಲದೆ ವಲಯಕೊಬ್ಬ ಸ್ವಯಂ ಸೇವಕರನ್ನು ಗುರುತಿಸುವುದು ಹಾಗೂ ಘನತ್ಯಾಜ್ಯದ ಬಗ್ಗೆ ಸೂಕ್ತ ತರಬೇತಿ ನೀಡಲು ವಿಧಾನಸಭಾ ಕ್ಷೇತ್ರಕ್ಕೊಬ್ಬ ಮಾಸ್ಟರ್ ಟ್ರೈನರ್ ಗುರುತಿಸಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದು. ಪ್ರಮುಖವಾಗಿ ಸ್ಥಳೀಯ ಸಾರ್ವಜನಿಕರು, ಸ್ಥಳಿಯ ನಾಗರಿಕ ಸಂಸ್ಥೆಗಳು, ಆರ್.ಡಬ್ಲೂ.ಎ ಗಳನ್ನು ಇದರಲ್ಲಿ ಭಾಗಿಯಾಗಿಸಿಕೊಂಡು ಕಸದ ಸಮಸ್ಯೆ ನಿವಾರಣೆಗೆ ಅಗತ್ಯ ಕ್ರಮವಹಿಸಬೇಕು. ಈ ಮೂಲಕ ನಗರವನ್ನು ಸ್ವಚ್ಛ ನಗರವಾಗಿ ಬದಲಾಯಿಸಬೇಕು ಎಂದು ಹೇಳಿದರು.

ಬೆಂಗಳೂರು ನಗರವನ್ನು ಸ್ವಚ್ಛವಾಗಿಡುವ ನಿಟ್ಟಿನಲ್ಲಿ ಎಲ್ಲರನ್ನು ಒಟ್ಟುಗೂಡಿಸಿಕೊಂಡು ಶುಚಿಮಿತ್ರ ಯೋಜನೆಯನ್ನು ಉತ್ತಮಪಡಿಸಿ ಸಮನ್ವಯದಿಂದ ಕೆಲಸ ಮಾಡಬೇಕು. 'ನಮ್ಮ ಕಸ ನಮ್ಮ ಜವಾಬ್ದಾರಿ' ಎಂಬ ಧ್ಯೇಯದೊಂದಿಗೆ ಎಲ್ಲರೂ ಕೆಲಸ ಮಾಡಿದರೆ ಕಸದ ಸಮಸ್ಯೆಯನ್ನು ಪರಿಹರಿಸಬಹುದಾಗಿದೆ. ಎಲ್ಲ ಕಡೆ ಸಮರ್ಪಕವಾಗಿ ಕಸ ವಿಂಗಡಣೆಯಾಗಬೇಕು. ಸದ್ಯ ಬೊಮ್ಮನಹಳ್ಳಿ ವಲಯದ ಹೆಚ್.ಎಸ್.ಆರ್ ಲೇಔಟ್ ನಲ್ಲಿ ಒಂದು ಕಲಿಕಾ ಕೇಂದ್ರವಿದ್ದು, ಎಲ್ಲಾ ವಲಯದಲ್ಲೊಂದು ಕಲಿಕಾ ಕೇಂದ್ರ ಸ್ಥಾಪನೆ ಮಾಡಿ ಕಸದಿಂದ ಗೊಬ್ಬರ ತಯಾರಿಸುವ, ಕಸ ವಿಂಗಡಣೆ ಮಾಡುವ ಬಗ್ಗೆ

ಎಲ್ಲರಲ್ಲೂ ಅರಿವು ಮೂಡಿಸಬೇಕು. ಆ ಬಗ್ಗೆ ಜನರಲ್ಲಿ ಹೆಚ್ಚು ಅರಿವು ಮೂಡಿಸಿದಾಗ ಕಸ ವಿಲೇವಾರಿ ಪದ್ಧತಿಯಲ್ಲಿ ಬದಲಾವಣೆ ತರಲು ಸಾಧ್ಯವಾಗುತ್ತದೆ. ಈ ಬಗ್ಗೆ ಎಲ್ಲಾ ವಲಯದ ಜಂಟಿ ಆಯುಕ್ತರು ಮತ್ತು ಅಧೀಕ್ಷಕ ಅಭಿಯಂತರರು(ಘನತ್ಯಾಜ್ಯ ವಿಭಾಗ) ರವರು ಹೆಚ್.ಎಸ್.ಆರ್ ಲೇಔಟ್ ನಲ್ಲಿರುವ ಕಲಿಕಾ ಕೇಂದ್ರಕ್ಕೆ ಒಮ್ಮೆ ಭೇಟಿ ನೀಡಿ ಅಲ್ಲಿನ ಅಂಶಗಳನ್ನು ತಮ್ಮ ವಲಯದ ವ್ಯಾಪ್ತಿಯಲ್ಲಿ ಅಳವಡಿಸಲು ಕ್ರಮವಹಿಸಬೇಕೆಂದು ಸೂಚನೆ ನೀಡಿದರು.

ಘನತ್ಯಾಜ್ಯ ವಿಲೇವಾರಿ ಪದ್ದಯಲ್ಲಿ ಆಗುವ ಬದಲಾವಣೆಗಳ ಬಗ್ಗೆ ಆಗಾಗ್ಗೆ ಅಧಿಕಾರಿಗಳ ಜೊತೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ವರದಿ ಪಡೆಯಲು ಆಡಳಿತಗಾರರು ವಿಶೇಷ ಆಯುಕ್ತರು(ಘನತ್ಯಾಜ್ಯ) ರಂದೀಪ್ ರವರಿಗೆ ಸೂಚನೆ ನೀಡಿದರು.